# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:18ನೇ ಜುಲೈ, 2023

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮಧು ಜಿ. ಮಾದೇಗೌಡ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 90(595) | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |
| ಆ) 7ನೇ ಪಟ್ಟಿಯಿಂದ ತಡೆಹಿಡಿಯಲಾದ **ಡಾ: ತಳವಾರ್ ಸಾಬಣ್ಣ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 102(723) | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು**

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2023

02. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2023

03. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2023

## 03. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2023
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

…2

02. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2023
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2023

**ಶ್ರೀ ಎಚ್.ಕೆ. ಪಾಟೀಲ (ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನರಚನೆ ಹಾಗೂ ಪ್ರವಾಸೋದ್ಯಮ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಗಳೊಂದಿಗೆ ಅಂಗೀಕೃತ ರೂಪದಲ್ಲಿರುವ 2023ನೇ ಸಾಲಿನ **"ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ"**ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ವಿತ್ತೀಯ ಕಾರ್ಯಕಲಾಪ

2023–24ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

## 05. ಗಮನ ಸೆಳೆಯುವ ಸೂಚನೆಗಳು

01 **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು PMGSY ಯೋಜನೆಯಿಂದ ಸಂಪರ್ಕವಿಲ್ಲದ ವಾಸ ಸ್ಥಳಗಳಿಗೆ ಉತ್ತಮ ಗುಣಮಟ್ಟದ ರಸ್ತೆ ಸಂಪರ್ಕವನ್ನು ಒದಗಿಸುತ್ತಿದ್ದು, ನಮ್ಮ ಗ್ರಾಮ–ನಮ್ಮ ರಸ್ತೆ ಯೋಜನೆಗೆ 5 ವರ್ಷಗಳಿಂದ ಯಾವುದೇ ಅನುದಾನ ನೀಡದೆ ಇರುವುದರಿಂದ ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿ ಕುಂಠಿತವಾಗಿರುವ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02 **ಶ್ರೀ ಅ.ದೇವೇಗೌಡ** ಅವರು ರಾಜ್ಯದಲ್ಲಿ ಗಾಂಜಾ ಮತ್ತು ಡ್ರಗ್ಸ್ ಕಳ್ಳಸಾಗಾಣಿಕೆ ಹಾಗೂ ಮಾರಾಟವನ್ನು ತಡೆಗಟ್ಟಲು ಕಾನೂನು ರೂಪಿಸುವ ಕುರಿತು ಗೃಹ ಸಚಿವರ ಗಮನ ಸೆಳೆಯುವುದು.

...3

೦೩ **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳಿಗೆ ಪದೋನ್ನತಿ ನೀಡಿ ಸುಮಾರು 9 ವರ್ಷಗಳಾಗಿದ್ದು, ತದನಂತರದ ದಿನಗಳಲ್ಲಿ ಸುಮಾರು ಅರ್ಹ ಸಹ ಶಿಕ್ಷಕರು ಪದೋನ್ನತಿ ಪಡೆಯದೆ ನಿರಾಶರಾಗಿರುವ ಕುರಿತು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

೦೪ **ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ದಿನಾಂಕ:22.12.2005 ಹಾಗೂ 28.12.2005 ರಂದು ನೇಮಕಗೊಂಡಿರುವ ಅಸೋಸಿಯೇಟ್ ಪ್ರೊಫೆಸರ್‌ಗಳು ನಿವೃತ್ತಿ ಹೊಂದಿದ್ದು ಅವರುಗಳಿಗೆ ಹಳೆ ಪಿಂಚಣಿ ಯೋಜನೆಯಡಿಯಲ್ಲಿ ಪಿಂಚಣಿ ಮಂಜೂರು ಮಾಡದಿರುವ ಕುರಿತು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

೦೫ **ಶ್ರೀಯುತರುಗಳಾದ ಡಿ.ಎಸ್. ಅರುಣ್, ಪ್ರತಾಪ್ ಸಿಂಹ ನಾಯಕ್ ಕೆ ಹಾಗೂ ಶ್ರೀಮತಿ ಭಾರತಿಶೆಟ್ಟಿ** ಅವರುಗಳು ಮೂಡಿಗೆರೆಯಲ್ಲಿ ಬಿ.ಜೆ.ಪಿ. ಯುವ ಮೋರ್ಚಾ ಅಧ್ಯಕ್ಷರ ಮೇಲೆ ನಡೆದಿರುವ ಹಲ್ಲೆ ಕುರಿತು ಗೃಹ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1 **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಉತ್ತರ ಕರ್ನಾಟಕದ ಭಾಗದಲ್ಲಿ ಸಾಕಷ್ಟು ನದಿಗಳಿದ್ದರೂ ನೀರಿನ ಸಮರ್ಪಕ ಬಳಕೆಯಾಗುತ್ತಿಲ್ಲದಿರುವ ಕುರಿತು ಪ್ರಸ್ತಾಪಿಸುವುದು.

೦2 **ಶ್ರೀಯುತರುಗಳಾದ ಬಿ.ಎಂ.ಫಾರೂಖ್ ಹಾಗೂ ಕೆ.ಎ.ತಿಪ್ಪೇಸ್ವಾಮಿ ಅವರುಗಳು** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ BSF (BLACK SOLIDER FLY) ತಂತ್ರಜ್ಞಾನವನ್ನು ಬಳಸಿಕೊಂಡು ತ್ಯಾಜ್ಯ ಮುಕ್ತ ಬೆಂಗಳೂರನ್ನು ಮಾಡುವ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| **ಶ್ರೀಯುತರುಗಳಾದ:-**<br>**ಎಸ್.ಎಲ್.ಭೋಜೇಗೌಡ,**<br>**ಕೆ.ಎ. ತಿಪ್ಪೇಸ್ವಾಮಿ, ಬಿ.ಎಂ.ಫಾರೂಖ್,**<br>**ಗೋವಿಂದರಾಜು ಮತ್ತು ನಿರಾಣಿ ಹಣಮಂತ ರುದ್ರಪ್ಪ ಹಾಗೂ ಇತರರು** | ಮಹದಾಯಿ, ಮೇಕೆದಾಟು ಮತ್ತು ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ಅನುದಾನವನ್ನು ಆಯವ್ಯಯದಲ್ಲಿ ಒದಗಿಸದೇ ಇರುವುದರಿಂದ ನೀರಾವರಿ ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದಿರುವ ಕಾರಣದಿಂದ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ನಿಗಧಿತ ಅವಧಿಯಲ್ಲಿ ಬಳಸಿಕೊಳ್ಳಲಾಗದೆ ರಾಜ್ಯದ ಜನತೆಗೆ ಅಪಾರ ನಷ್ಟವುಂಟಾಗಿರುವ ಕುರಿತು. |

...4

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. "ಗೋಹತ್ಯೆ ನಿಷೇಧ ಕಾಯ್ದೆ ರದ್ಧತಿ ಕುರಿತು" ದಿನಾಂಕ:05.07.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:27(104)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್. ರವಿಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. "ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು" ದಿನಾಂಕ:10.07.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:67(499)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶಶೀಲ್ ಜಿ. ನಮೋಶಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**